**All India Radio: Bangalore**
**National Bulletin In Kannada**
**20.08.2025 7.35 am**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**20.08.2025 7.35 am.**

**<><><><>**

ಮುಖ್ಯಾಂಶಗಳು

೧. ಉಪರಾಷ್ಟ್ರಪತಿ ಚುನಾವಣೆಗೆ ಎನ್.ಡಿ.ಎ ಅಭ್ಯರ್ಥಿಯಾಗಿ ಮೈತ್ರಿಕೂಟದ ಪ್ರಮುಖ ನಾಯಕರ ಸಮ್ಮುಖದಲ್ಲಿ ಇಂದು ಸಿ.ಪಿ.ರಾಧಾಕೃಷ್ಣನ್ ನಾಮಪತ್ರ.

೨. ಕೇಂದ್ರ ಸರ್ಕಾರದ ಹಲವಾರು ಯೋಜನೆಗಳಿಂದ ದೇಶ ಅತ್ಯಂತ ವೇಗವಾಗಿ ಬೆಳೆಯುತ್ತಿರುವ ಆರ್ಥಿಕತೆಯಾಗಿ ರೂಪುಗೊಂಡಿದೆ; ಪ್ರಧಾನಿ ನರೇಂದ್ರ ಮೋದಿ

೩. ಕರ್ನಾಟಕದಲ್ಲಿ ಪರಿಶಿಷ್ಠ ವರ್ಗದಲ್ಲಿ ಒಳಮೀಸಲಾತಿ ಜಾರಿಗೊಳಿಸಲು ನಿರ್ಧಾರ

೪. ಮಹಾರಾಷ್ಟ್ರದಾದ್ಯಂತ ಮುಂದುವರೆದ ವ್ಯಾಪಕ ಮಳೆ; ಕನಿಷ್ಠ ೨೧ ಮಂದಿ ಸಾವು

><><><><><><><><

ಉಪರಾಷ್ಟ್ರಪತಿ ಚುನಾವಣೆಗೆ ಎನ್.ಡಿ.ಎ ಅಭ್ಯರ್ಥಿಯಾಗಿ ಸಿ.ಪಿ.ರಾಧಾಕೃಷ್ಣನ್ ಇಂದು ನಾಮಪತ್ರ ಸಲ್ಲಿಸಲಿದ್ದಾರೆ. ಈ ಸಂದರ್ಭದಲ್ಲಿ ಎನ್.ಡಿ.ಎ. ಮೈತ್ರಿಕೂಟದ ಪ್ರಮುಖ ನಾಯಕರು ಉಪಸ್ಥಿತರಿರಲಿದ್ದಾರೆ. ದೆಹಲಿಯಲ್ಲಿ ನಿನ್ನೆ ಎನ್.ಡಿ.ಎ. ಸಂಸದೀಯ ಪಕ್ಷಗಳ ಸಭೆ ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ನಡೆಯಿತು. ಕೇಂದ್ರ ಸಚಿವರಾದ ಜೆ.ಪಿ. ನಡ್ಡಾ, ಅಮಿತ್ ಷಾ, ರಾಜನಾಥ್ ಸಿಂಗ್, ನಿತಿನ್ ಗಡ್ಕರಿ, ಕಿರಣ್ ರಿಜಿಜು, ನಿರ್ಮಲಾ ಸೀತಾರಾಮನ್, ಪ್ರಲ್ಹಾದ್ ಜೋಷಿ, ಎಚ್.ಡಿ. ಕುಮಾರಸ್ವಾಮಿ , ಅರ್ಜುನ್ ರಾಮ್ ಮೇಘ್ವಾಲ್, ಸೇರಿದಂತೆ ಹಲವು ನಾಯಕರು ಭಾಗಿಯಾಗಿದ್ದರು. ಸಭೆಗೆ ಆಗಮಿಸಿದ್ದ ಉಪರಾಷ್ಟ್ರಪತಿ ಅಭ್ಯರ್ಥಿ ಸಿ.ಪಿ. ರಾಧಾಕೃಷ್ಣನ್ ಅವರನ್ನು ಪ್ರಧಾನಿ ನರೇಂದ್ರ ಮೋದಿ ಅಭಿನಂದಿಸಿ ಶುಭ ಹಾರೈಸಿದರು. ಬಳಿಕ ಹಲವು ಮುಖಂಡರು ರಾಧಾ ಕೃಷ್ಣನ್ ಅವರಿಗೆ ಹೂ ಗುಚ್ಛ ನೀಡಿ ಶುಭ ಕೋರಿದರು. ಸಭೆಯ ಕುರಿತು ಮಾಹಿತಿ ನೀಡಿದ ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು, ಉಪರಾಷ್ಟ್ರಪತಿ ಚುನಾವಣೆಗೆ ಎನ್.ಡಿ.ಎ ಅಭ್ಯರ್ಥಿ ಸಿ.ಪಿ ರಾಧಾಕೃಷ್ಣನ್ ಅವರನ್ನು ಸರ್ವಾನುಮತದಿಂದ ಆಯ್ಕೆ ಮಾಡಲು ಪ್ರಧಾನಿ ನರೇಂದ್ರ ಮೋದಿ ವಿರೋಧ ಪಕ್ಷಗಳಿಗೆ ಮನವಿ ಮಾಡಿದ್ದಾರೆ ಎಂದರು. ಸಿ.ಪಿ ರಾಧಾಕೃಷ್ಣನ್ ಅವರು ಸರಳತೆ, ಸಮಗ್ರತೆ ಮತ್ತು ಸಾರ್ವಜನಿಕ ಸೇವೆಯ ಜೀವನವನ್ನು ನಡೆಸಿದ್ದಾರೆ. ಅವರ ಸಂಪೂರ್ಣ ಜೀವನ ಕಾಲದಲ್ಲಿ ಯಾವುದೇ ವಿವಾದಗಳಿಲ್ಲ, ಭ್ರಷ್ಟಾಚಾರವಿಲ್ಲ, ಯಾವುದೇ ಕಳಂಕವಿಲ್ಲ. ಅಂತಹ ವ್ಯಕ್ತಿ ದೇಶದ ಉಪರಾಷ್ಟ್ರಪತಿಯಾದರೆ, ಅದು ದೇಶಕ್ಕೆ ಬಹಳ ಸಂತೋಷದ ವಿಷಯವಾಗಿರುತ್ತದೆ ಎಂದು ಪ್ರಧಾನಿ ನರೇಂದ್ರ ಮೋದಿ ಅವರು ಹೇಳಿರುವುದಾಗಿ ಸಚಿವರು ಮಾಹಿತಿ ನೀಡಿದರು.

><><><><><><><><

ಕೇಂದ್ರ ಸರ್ಕಾರ ಜಾರಿಗೊಳಿಸಿರುವ ಹಲವಾರು ಯೋಜನೆಗಳಿಂದ ಭಾರತ ಅತ್ಯಂತ ವೇಗವಾಗಿ ಬೆಳೆಯುತ್ತಿರುವ ಆರ್ಥಿಕತೆಯ ದೇಶವಾಗಿ ದಾಪುಗಾಲು ಇಟ್ಟಿದೆ. ಈ ಮೂಲಕ ವಿಕಸಿತ ಭಾರತದ ಕಡೆಗೆ ದೇಶದ ಪಯಣ ಮುನ್ನಡೆಯುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಭಾರತವನ್ನು ಅತ್ಯಂತ ವೇಗವಾಗಿ ಬೆಳೆಯುತ್ತಿರುವ ಆರ್ಥಿಕತೆಯನ್ನಾಗಿ ಮುನ್ನಡೆಸುತ್ತಿರುವ ಸರ್ಕಾರದ ಹೆಗ್ಗುರುತಿನ ಉಪಕ್ರಮಗಳನ್ನು ಎತ್ತಿ ತೋರಿಸುವ ಕುರಿತು ಕೇಂದ್ರ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವ ಹರ್ದೀಪ್ ಸಿಂಗ್ ಪುರಿ ಬರೆದ ಲೇಖನಕ್ಕೆ ಸಾಮಾಜಿಕ ಮಾಧ್ಯಮದಲ್ಲಿ ಪ್ರಧಾನಿ ಪ್ರತಿಕ್ರಿಯೆ ನೀಡಿದ್ದಾರೆ. ರಾಷ್ಟ್ರೀಯ ನಿರ್ಣಾಯಕ ಖನಿಜಗಳ ಮಿಷನ್, ಮಿಷನ್ ಸುದರ್ಶನ ಚಕ್ರ, ವಿಕಸಿತ ಭಾರತ್ ರೋಜ್‌ಗಾರ್ ಯೋಜನೆ, ರಾಷ್ಟ್ರೀಯ ಆಳ ಜಲ ಪರಿಶೋಧನೆ ಮುಂತಾದ ಯೋಜನೆಗಳಿಂದ ದೇಶದ ಅರ್ಥವ್ಯವಸ್ಥೆ ಅತ್ಯಂತ ವೇಗವಾಗಿ ಬೆಳೆಯುತ್ತಿದೆ ಎಂದು ಪ್ರಧಾನಿ ಹೇಳಿದ್ದಾರೆ.

><><><><><><><><

ಕರ್ನಾಟಕದಲ್ಲಿ ಪರಿಶಿಷ್ಠ ವರ್ಗದಲ್ಲಿ ಒಳಮೀಸಲಾತಿ ಜಾರಿಗೊಳಿಸಲು ರಾಜ್ಯಸರ್ಕಾರ ತೀರ್ಮಾನಿಸಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ನಡೆದ ಸಭೆಯಲ್ಲಿ ಮಹತ್ವದ ನಿರ್ಧಾರ ಕೈಗೊಂಡಿದ್ದು, ಇಂದು ನಡೆಯಲಿರುವ ವಿಧಾನಮಂಡಲ ಅಧಿವೇಶನದಲ್ಲಿ ಈ ಕುರಿತು ತೀರ್ಮಾನವನ್ನು ಸರ್ಕಾರ ಪ್ರಕಟಿಸಲಿದೆ. ನಿನ್ನೆ ತಡರಾತ್ರಿ ವರೆಗೆ ನಡೆದ ಸಭೆಯ ನಂತರ ಪರಿಶಿಷ್ಠ ಸಮುದಾಯದಲ್ಲಿ ಒಳಮೀಸಲಾತಿ ಜಾರಿಗೊಳಿಸುವ ಮಹತ್ವದ ನಿರ್ಧಾರ ಕೈಗೊಂಡ ಮುಖ್ಯಮಂತ್ರಿ ಅವರನ್ನು ಪರಿಶಿಷ್ಠ ಸಮುದಾಯದ ಪ್ರಮುಖ ಮುಖಂಡರು ಅಭಿನಂದಿಸಿದರು. ಸಭೆಯ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಕಾನೂನು ಸಚಿವ ಹೆಚ್.ಕೆ.ಪಾಟೀಲ್ ಇಂದು ಮುಖ್ಯಮಂತ್ರಿ ಅವರು ಅಧಿವೇಶನದಲ್ಲಿ ನಿರ್ಧಾರ ಪ್ರಕಟಿಸಲಿದ್ದಾರೆ, ಎಲ್ಲರಿಗೂ ಸಮಧಾನವಾಗುವ ತೀರ್ಮಾನವನ್ನು ಸರ್ಕಾರ ಕೈಗೊಂಡಿದೆ ಎಂದರು.

><><><><><><><><

ಎಂಬಿಎ, ಎಂಸಿಎ, ಎಂಇ, ಎಂ.ಟೆಕ್ ಮತ್ತು ಎಂ.ಆರ್ಕಿಟೆಕ್ಚರ್ ಕೋರ್ಸ್‌ಗಳ ಪ್ರವೇಶಕ್ಕೆ ಸಂಬಂಧಿಸಿದಂತೆ ಅಭ್ಯರ್ಥಿಗಳು ಆಗಸ್ಟ್ ೨೦ರಂದು ಕ್ಲೇಮ್‌ಸ್ಲಿಪ್ ಡೌನ್‌ಲೋಡ್ ಮಾಡಿಕೊಂಡು ಆ ಪ್ರಕಾರ ಮೂಲ ದಾಖಲೆಗಳನ್ನು ಸಿದ್ಧಪಡಿಸಿಟ್ಟುಕೊಳ್ಳಬೇಕು ಎಂದು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಕಾರ್ಯನಿರ್ವಾಹಕ ನಿರ್ದೇಶಕ ಎಚ್.ಪ್ರಸನ್ನ ತಿಳಿಸಿದ್ದಾರೆ. ಅಭ್ಯರ್ಥಿಗಳು ಆನ್‌ಲೈನ್ ಅರ್ಜಿಯಲ್ಲಿ ದಾಖಲಿಸಿರುವ ಮಾಹಿತಿಯನ್ನು ಆಧರಿಸಿ ಕ್ಲೇಮ್‌ಸ್ಲಿಪ್ ಅನ್ನು ಬಿಡುಗಡೆ ಮಾಡಲಾಗುವುದು. ನಂತರ ಪ್ರವೇಶ ಸಂದರ್ಭದಲ್ಲಿ ಅವುಗಳನ್ನು ಕಾಲೇಜಿಗೆ ಸಲ್ಲಿಸಬೇಕು ಎಂದು ತಿಳಿಸಿದ್ದಾರೆ.

><><><><><><><><

ಮಹಾರಾಷ್ಟ್ರದಾದ್ಯಂತ ಮಳೆ ಮತ್ತು ಪ್ರವಾಹ ಸಂಬಂಧಿತ ಘಟನೆಗಳಿಂದಾಗಿ ಕಳೆದ ನಾಲ್ಕು ದಿನಗಳಲ್ಲಿ ಕನಿಷ್ಠ ೧೧ ಜನರು ಸಾವನ್ನಪ್ಪಿದ್ದಾರೆ. ಮುಂಬೈ, ಥಾಣೆ, ಪಾಲ್ಘರ್ ಕೊಂಕಣ್ ಮತ್ತು ಮಹಾರಾಷ್ಟ್ರದ ಇತರ ಭಾಗಗಳಲ್ಲಿ ಸತತ ನಾಲ್ಕನೇ ದಿನವೂ ಧಾರಾಕಾರ ಮಳೆಯಾಗುತ್ತಿದೆ. ಪ್ರವಾಹದಿಂದ ತೀವ್ರವಾಗಿ ಬಾಧಿತವಾಗಿರುವ ನಾಂದೇಡ್ ಜಿಲ್ಲೆಯಲ್ಲಿ ಮಾತ್ರ ಎಂಟು ಜನರು ಸಾವನ್ನಪ್ಪಿದ್ದಾರೆ. ಐಎಂಡಿ ಪ್ರಕಾರ, ಮುಂಬೈನಲ್ಲಿ ಸುಮಾರು ೩೦೦ ಮಿಮೀ ದಾಖಲೆಯ ಮಳೆಯಾಗಿದ್ದು, ನಗರದ ಸಾಮಾನ್ಯ ಜೀವನ ಅಸ್ತವ್ಯಸ್ತಗೊಂಡಿದೆ. ಹವಾಮಾನ ಸಂಸ್ಥೆ ಇಂದು ವಿದರ್ಭ ಪ್ರದೇಶಕ್ಕೆ ರೆಡ್ ಅಲರ್ಟ್ ಎಚ್ಚರಿಕೆ ನೀಡಿದೆ. ಸುರಕ್ಷತಾ ಕಾಳಜಿಯನ್ನು ಗಮನದಲ್ಲಿಟ್ಟುಕೊಂಡು, ಪುಣೆ ಮತ್ತು ಮುಂಬೈ ನಡುವಿನ ಎಲ್ಲಾ ರೈಲುಗಳನ್ನು ಮುಂದಿನ ಆದೇಶದವರೆಗೆ ಸ್ಥಗಿತಗೊಳಿಸಲಾಗಿದೆ. ಥಾಣೆ ಮತ್ತು ರಾಯಗಡ್ ಜಿಲ್ಲೆಗಳು ಇಂದು ಶಾಲಾ, ಕಾಲೇಜುಗಳಿಗೆ ರಜೆ ಘೋಷಿಸಿವೆ. ಮೋಡಕ್ ಸಾಗರ್ ಅಣೆಕಟ್ಟೆ ಪ್ರಸ್ತುತ ಶೇಕಡಾ ೯೮ ರಷ್ಟು ತುಂಬಿದ್ದು, ಇಂದು ಭಾರೀ ಮಳೆಯಿಂದಾಗಿ ನೀರು ಉಕ್ಕಿ ಹರಿಯುವ ಸಾಧ್ಯತೆ ಇದೆ ಎಂದು ಅಧಿಕಾರಿಗಳು ಎಚ್ಚರಿಸಿದ್ದಾರೆ. ವೈತರ್ಣ ನದಿಯ ಕೆಳಭಾಗದಲ್ಲಿರುವ ಮತ್ತು ಅದರ ಸಮೀಪವಿರುವ ಹಳ್ಳಿಗಳು ಮತ್ತು ನಿವಾಸಿಗಳು ಜಾಗರೂಕರಾಗಿರಲು ಅಧಿಕಾರಿಗಳು ಸೂಚಿಸಿದ್ದಾರೆ. ಕೊಯ್ನಾ ಅಣೆಕಟ್ಟಿನ ಆರು ಬಾಗಿದ ಗೇಟ್‌ಗಳನ್ನು ಸಹ ತೆರೆಯಲಾಗಿದ್ದು, ಕೊಯ್ನಾ ನದಿಪಾತ್ರಕ್ಕೆ ೯೩ ಸಾವಿರದ ೨೦೦ ಕ್ಯೂಸೆಕ್ ನೀರನ್ನು ಬಿಡುಗಡೆ ಮಾಡಲಾಗಿದೆ. ಅಣೆಕಟ್ಟೆನಿಂದ ಹಠಾತ್ ನೀರು ಬಿಡುಗಡೆಯಾದ ಸಂದರ್ಭದಲ್ಲಿ ಸಾರ್ವಜನಿಕ ಸುರಕ್ಷತೆಯನ್ನು ಖಚಿತಪಡಿಸಿಕೊಳ್ಳಲು ಅಗತ್ಯ ತಡೆಗಟ್ಟುವ ಕ್ರಮಗಳನ್ನು ತೆಗೆದುಕೊಳ್ಳುವಂತೆ ಸಂಬಂಧಪಟ್ಟ ಎಲ್ಲಾ ಸಂಸ್ಥೆಗಳಿಗೆ ಸೂಚನೆ ನೀಡಲಾಗಿದೆ.

><><><><><><><><

ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಅವರು ಮೂರು ದಿನಗಳ ಕಾಲ ರಷ್ಯಾಗೆ ಭೇಟಿ ನೀಡಿದ್ದು, ಅವರು ಇಂದು ಮಾಸ್ಕೋದಲ್ಲಿ ನಡೆಯಲಿರುವ ವ್ಯಾಪಾರ, ಆರ್ಥಿಕ, ವೈಜ್ಞಾನಿಕ, ತಾಂತ್ರಿಕ ಮತ್ತು ಸಾಂಸ್ಕೃತಿಕ ಸಹಕಾರ ಕುರಿತ ಭಾರತ-ರಷ್ಯಾ ಅಂತರ-ಸರ್ಕಾರಿ ಆಯೋಗದ ೨೬ನೇ ಅಧಿವೇಶನದ ಸಹ-ಅಧ್ಯಕ್ಷತೆ ವಹಿಸಲಿದ್ದಾರೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ. ಭೇಟಿಯ ಸಮಯದಲ್ಲಿ, ಡಾ. ಜೈಶಂಕರ್, ರಷ್ಯಾ ವಿದೇಶಾಂಗ ಸಚಿವ ಸೆರ್ಗೆಯ್ ಲಾವ್ರೊವ್ ಅವರೊಂದಿಗೆ ಚರ್ಚೆ ನಡೆಸಲಿದ್ದಾರೆ ಹಾಗೂ ಭಾರತ-ರಷ್ಯಾ ವ್ಯಾಪಾರ ವೇದಿಕೆಯನ್ನು ಉದ್ದೇಶಿಸಿ ಮಾತನಾಡಲಿದ್ದಾರೆ.

><><><><><><><><

ಪ್ರಧಾನಿ ನರೇಂದ್ರ ಮೋದಿ ಅವರ ದೃಷ್ಟಿಕೋನದಲ್ಲಿ ಮತ್ತು ಕೇಂದ್ರ ಸಂವಹನ ಮತ್ತು ದೂರಸಂಪರ್ಕ ಸಚಿವ ಜ್ಯೋತಿರಾದಿತ್ಯ ಸಿಂಧಿಯಾ ಅವರ ಮಾರ್ಗದರ್ಶನದಲ್ಲಿ, ಅಂಚೆ ಇಲಾಖೆ ಐಟಿ ೨.೦ - ಸುಧಾರಿತ ಅಂಚೆ ತಂತ್ರಜ್ಞಾನವನ್ನು ಯಶಸ್ವಿಯಾಗಿ ಹೊರತಂದಿದೆ. ಈ ಹೆಗ್ಗುರುತಿನ ಡಿಜಿಟಲ್ ನವೀಕರಣವು ಭಾರತ ಸರ್ಕಾರದ ಡಿಜಿಟಲ್ ಇಂಡಿಯಾ ಮತ್ತು ಮೇಕ್ ಇನ್ ಇಂಡಿಯಾದ ದೃಷ್ಟಿಕೋನಕ್ಕೆ ಅನುಗುಣವಾಗಿ ತನ್ನ ೧ ಲಕ್ಷದ ೬೫ ಸಾವಿರ ಅಂಚೆ ಕಚೇರಿಗಳಿಗೆ ಇಲಾಖೆಯ ಆಧುನೀಕರಣದ ಪ್ರಯಾಣದಲ್ಲಿ ಪರಿಣಾಮಕಾರಿ ಹೆಜ್ಜೆಯನ್ನು ಸೂಚಿಸುತ್ತದೆ . ಐಟಿ ೨.೦ ವೇಗದ, ಹೆಚ್ಚು ವಿಶ್ವಾಸಾರ್ಹ ಮತ್ತು ನಾಗರಿಕ ಕೇಂದ್ರಿತ ಅಂಚೆ ಮತ್ತು ಹಣಕಾಸು ಸೇವೆಗಳನ್ನು ದೇಶದ ಮೂಲೆ ಮೂಲೆಗೂ ಒದಗಿಸಲಿದೆ. ಒಳಗೊಳ್ಳುವಿಕೆ ಮತ್ತು ಸೇವಾ ಶ್ರೇಷ್ಠತೆಗೆ ಇಂಡಿಯಾ ಪೋಸ್ಟ್‌ನ ಬದ್ಧತೆಯನ್ನು ಇದು ಪುನರುಚ್ಚರಿಸುತ್ತದೆ. ಐಟಿ ಆಧುನೀಕರಣ ಯೋಜನೆ ೧.೦ರ ಯಶಸ್ಸಿನ ಆಧಾರದ ಮೇಲೆ, ಹೊಸದಾಗಿ ಪ್ರಾರಂಭಿಸಲಾದ ಸುಧಾರಿತ ಅಂಚೆ ತಂತ್ರಜ್ಞಾನ ವೇದಿಕೆ ವೇಗವಾಗಿ, ಹೆಚ್ಚು ವಿಶ್ವಾಸಾರ್ಹ ಮತ್ತು ಬಳಕೆದಾರ ಸ್ನೇಹಿ ನಾಗರಿಕ ಕೇಂದ್ರಿತ ಸೇವೆಗಳನ್ನು ನೀಡುವ ಮೈಕ್ರೋಸರ್ವೀಸಸ್ ಆಧಾರಿತ ಅಪ್ಲಿಕೇಶನ್ ಅನ್ನು ಪರಿಚಯಿಸುತ್ತದೆ. ಕೇಂದ್ರ ಸಚಿವರಾದ ಸಿಂಧಿಯಾ ಮಾತನಾಡಿ, "ಎ.ಪಿ.ಟಿ ಇಂಡಿಯಾ ಪೋಸ್ಟ್ ಅನ್ನು ವಿಶ್ವದರ್ಜೆಯ ಸಾರ್ವಜನಿಕ ಸಾಗಾಣೆ ಸಂಸ್ಥೆಯಾಗಿ ಪರಿವರ್ತಿಸುತ್ತದೆ. ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ, ಇದು ಪೂರ್ಣ ಶಕ್ತಿಯೊಂದಿಗೆ ಸ್ವಾವಲಂಬಿ ಭಾರತವಾಗಿದ್ದು, ಬಲವಾದ, ಸ್ವಾವಲಂಬಿ ಡಿಜಿಟಲ್ ಇಂಡಿಯಾದ ಹಾದಿಯನ್ನು ರೂಪಿಸುತ್ತಿದೆ ಎಂದರು.

><><><><><><><><><

ಇಂದು ಹಿಂದುಳಿದ ವರ್ಗಗಳ ಹರಿಕಾರ ಹಾಗೂ ಮಾಜಿ ಮುಖ್ಯಮಂತ್ರಿ ಡಿ.ದೇವರಾಜ ಅರಸು ಅವರ ೧೦೧ನೇ ಜನ್ಮದಿನ. ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಇಂದು ಬೆಳಗ್ಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಡಿ.ದೇವರಾಜು ಅರಸು ಪ್ರಶಸ್ತಿ ಪ್ರದಾನ ಸಮಾರಂಭ  ಆಯೋಜಿಸಲಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಕಾರ್ಯಕ್ರಮ ಉದ್ಘಾಟಿಸಿ, ನಂತರ ದೇವರಾಜ ಅರಸು ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ.

><><><><><><><><><

ಭಾರತ ಮತ್ತು ಚೀನಾ ನಡುವಿನ ಸ್ಥಿರ ಮತ್ತು ರಚನಾತ್ಮಕ ಸಂಬಂಧಗಳು ಪ್ರಾದೇಶಿಕ ಮತ್ತು ಜಾಗತಿಕ ಶಾಂತಿ ಮತ್ತು ಸಮೃದ್ಧಿಗೆ ಗಣನೀಯ ಕೊಡುಗೆ ನೀಡುತ್ತವೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಭಾರತ-ಚೀನಾ ಗಡಿಯಲ್ಲಿ ಶಾಂತಿ ಮತ್ತು ನೆಮ್ಮದಿಯನ್ನು ಕಾಪಾಡಿಕೊಳ್ಳುವ ಮಹತ್ವವನ್ನು ಪ್ರಧಾನಿ ಒತ್ತಿ ಹೇಳಿದರು. ಗಡಿ ಪ್ರಶ್ನೆಯ ನ್ಯಾಯಯುತ, ಸಮಂಜಸ ಮತ್ತು ಪರಸ್ಪರ ಸ್ವೀಕಾರಾರ್ಹ ಪರಿಹಾರಕ್ಕೆ ಭಾರತದ ಬದ್ಧತೆಯನ್ನು ಪುನರುಚ್ಚರಿಸಿದರು.

><><><><><><><><><